## 46. ಶಾಲೆಗಳ ಆರಂಭಕ್ಕೆ ಕೇಂದ್ರ ಮಾರ್ಗಸೂಚಿ

ಕೊರೋನಾ ಸೋಂಕಿನ ಹಾವಳಿ ತಂದೊಡ್ಡಿದ ಲಾಕ್‌ಡೌನ್‌ನಿಂದಾಗಿ ದೇಶಾದ್ಯಂತ ಐದು ತಿಂಗಳಿನಿಂದಲೂ ಮುಚ್ಚಲ್ಪಟ್ಟಿದ್ದ ಶಾಲಾ ಶಿಕ್ಷಣ ಸೆಪ್ಟೆಂಬರ್ 21ರಿಂದ ಹಂತಹಂತವಾಗಿ ಪುನರಾರಂಭಗೊಳ್ಳಲಿವೆ.

ಕೊರೋನಾ ಕಾಟದ ನಡುವೆಯೂ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯದ ದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಶಾಲೆಗಳನ್ನು ತೆರೆಯುವ ಸಂಬಂಧ ಕೇಂದ್ರ ಸರ್ಕಾರ ಮಾರ್ಗಸೂಚಿಯನ್ನು ಬಿಡುಗಡೆ ಮಾಡಿದ್ದು ಇದು ಶಾಲೆಗಳ ಮರು ಆರಂಭಕ್ಕೆ ಮುನ್ನುಡಿ ಬರೆದಿದೆ.

ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ದಿ ಸಚಿವ ರಮೇಶ್ ಪೋಕ್ರಿಯಾಲ್ ನಿಶಾಂಕ್ ಅವರು ಈ ಮಾರ್ಗಸೂಚಿಯನ್ನು ಬಿಡುಗಡೆ ಮಾಡಿದ್ದು, 9 ರಿಂದ 12ನೇ ತರಗತಿಯ ವಿದ್ಯಾರ್ಥಿಗಳಿಗೆ ಮೊದಲ ಆದ್ಯತೆಯ ಮೇಲೆ ಶೈಕ್ಷಣಿಕ ಚಟುವಟಿಕೆ ಆರಂಭಿಸಲಾಗುತ್ತದೆ. ಶಾಲೆಗಳ ಪುನರಾರಂಭಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಪ್ರತ್ಯೇಕವಾದ ಪರ್ಯಾಯ ಶೈಕ್ಷಣಿಕ ವೇಳಾಪಟ್ಟಿಯನ್ನು ಬಿಡುಗಡೆ ಮಾಡಿದೆ.

**9 ರಿಂದ 12 ನೇ ತರಗತಿ ಆರಂಭಕ್ಕೆ ಆದ್ಯತೆ:** 9 ರಿಂದ 12 ತರಗತಿಯ ವಿದ್ಯಾರ್ಥಿಗಳಿಗಾಗಿ 8 ವಾರಗಳ ಶೈಕ್ಷಣಿಕ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ. ಇದೇ ವೇಳೆ ಅದರನ್ವಯ ಪ್ರಾಥಮಿಕ ಮತ್ತು ಮಾಧ್ಯಮಿಕ ಶಾಲಾ ಶಿಕ್ಷಣಕ್ಕಾಗಿ 12 ವಾರ, ಪಿಯುಸಿ ಶಿಕ್ಷಣಕ್ಕೆ ನಾಲ್ಕು ವಾರಗಳ ಪ್ರತ್ಯೇಕ ಶೈಕ್ಷಣಿಕ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ.

ಕೇಂದ್ರ ಸರ್ಕಾರ ಬಿಡುಗಡೆ ಮಾಡಿರುವ ಮಾರ್ಗಸೂಚಿಯು ಮನೆಯಲ್ಲೇ ಶಾಲಾ ಶಿಕ್ಷಣಾ ನೀಡುವ ಪ್ರಸ್ತಾಪ ಮುಂದಿಟ್ಟಿದೆ. ವಿದ್ಯಾರ್ಥಿಗಳಿಗೆ ದೂರವಾಣಿ, ರೇಡಿಯೋ, ಸಾಮಾಜಿಕ ಜಾಲತಾಣ, ದೂರದರ್ಶನ ಹಾಗೂ ಎಸ್‌ಎಂಎಸ್‌ಗಳ ಮೂಲಕ ಶೈಕ್ಷಣಿಕ ಸೇವೆ ಒದಗಿಸುವ ಭರವಸೆಯಿತ್ತರು.

ಆಧಾರ:ಸಂಯುಕ್ತ ಕರ್ನಾಟಕ, ದಿನಾಂಕ:22.09.2020